11. ವಿಷಯ: ಚನ್ನರಾಯಪಟ್ಟಣ ತಾಲ್ಲೂಕಿನ ಜಿನಿವಾರ ಕೆರೆಯಿಂದ ಕುಡಿಯುವ ನೀರಿಗೆ ಸಲುವಾಗಿ 24 ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಶ್ರೀ ಸಿ.ಎನ್. ಬಾಲಕೃಷ್ಣ (ಶ್ರವಣಬೆಳಗೊಳ) : ಮಾನ್ಯ ಅಧ್ಯಕ್ಷರೆ, ಚನ್ನರಾಯಪಟ್ಟಣ ತಾಲ್ಲೂಕಿನ ಜಿನಿವಾರ ಕೆರೆಯಿಂದ ಜುಟ್ಟನಹಳ್ಳಿ, ಹಿರೀಸಾವೆ ಮತ್ತು ಸುತ್ತಮುತ್ತಲಿನ ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಎಂ.ಬಿ. ಪಾಟೀಲ (ಮಾನ್ಯ ಜಲಸಂಪನ್ಮೂಲ ಸಚಿವರು): ಮಾನ್ಯ ಅಧ್ಯಕ್ಷರೆ, ಜನ–ಜಾನುವಾರುಗಳಿಗೆ ಕುಡಿಯುವ ನೀರಿಗೆ ಅನುವಾಗಲು ಚನ್ನರಾಯಪಟ್ಟಣ ತಾಲ್ಲೂಕಿನ ಹಿರಿಸಾವೆ, ಶ್ರವಣಬೆಳಗೊಳ ಹೋಬಳಿಯ 16 ಕೆರೆಗಳನ್ನು ಹಾಗೂ ಕೆ.ಆರ್.ಪೇಟೆ ತಾಲ್ಲೂಕಿನ ಸಂತೇಬಾಚಹಳ್ಳಿ ಹೋಬಳಿಯ 8 ಕೆರೆಗಳನ್ನು ಲಿಫ್ಟ್ ಮುಖೇನ ತುಂಬಿಸುವ ₹ 51.00 ಕೋಟಿ ಮೊತ್ತದ ಯೋಜನಾ ವರದಿಯನ್ನು ಕಾವೇರಿ ನೀರಾವರಿ ನಿಗಮದಲ್ಲಿ ತಯಾರಿಸಲಾಗಿರುತ್ತದೆ.

ಸದರಿ ಯೋಜನಾ ವರದಿಯನ್ನು ಕಾವೇರಿ ನೀರಾವರಿ ನಿಗಮದ ತಾಂತ್ರಿಕ ಉಪಸಮಿತಿಯ 81ನೇ ಹಾಗೂ 84ನೇ ಸಭೆಗಳಲ್ಲಿ ಪರಿಶೀಲಿಸಲಾಗಿದ್ದು, ಕೆಲವು ಮಾರ್ಪಾಡುಗಳನ್ನು ಉಪ ಸಮಿತಿಯು ಸೂಚಿಸಿರುತ್ತದೆ.

ಮೇಲ್ಕಂಡ ಸೂಚನೆಯಂತೆ, ಮಾರ್ಪಡಿತ ಯೋಜನಾ ವರದಿಯನ್ನು ಕಾವೇರಿ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿ ಸಭೆಯಲ್ಲಿ ಮರು ಪರಿಶೀಲನೆ ನಂತರ ನಿಗಮದ ಮಂಡಳಿಯ ಶಿಫಾರಸ್ಸನ್ನು ಅನುಸರಿಸಿ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಈ ಯೋಜನೆಗೆ 2013–14 ನೇ ಸಾಲಿನ ವಾರ್ಷಿಕ ಕಾರ್ಯಕ್ರಮ ಪಟ್ಟಿಯಲ್ಲಿ ₹ 15.00 ಕೋಟಿ ಅನುದಾನ ನಿಗದಿಪಡಿಸಲಾಗಿದೆ

ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು ವರದಿ ಮಾಡಿರುತ್ತಾರೆ.

ಶ್ರೀ ಸಿ.ಎನ್. ಬಾಲಕೃಷ್ಣ: ಮಾನ್ಯ ಅಧ್ಯಕ್ಷರೆ, ಚನ್ನರಾಯಪಟ್ಟಣ ತಾಲ್ಲೂಕಿನ ಜಿನಿವಾರೆ ಕೆರೆಯಿಂದ ಸುಮಾರು 56 ಕ್ಯೂಸೆಕ್ ನೀರನ್ನು ಕುಡಿಯುವ ನೀರಿಗೆ ಸಲುವಾಗಿ ಹಿಪ್ಪನಹಳ್ಳಿ, ಹಿರಿಸಾವೆ ಮತ್ತು ಸುತ್ತಮುತ್ತಲ ಸುಮಾರು 24 ಕೆರೆಗಳಿಗೆ ನೀರನ್ನು ತುಂಬಿಸುವ ಸಲುವಾಗಿ 51 ಕೋಟಿ ರೂ. ವೆಚ್ಚದಲ್ಲಿ ಒಂದು ಯೋಜನೆ ತಯಾರಿಸಿದ್ದು, ಈ ಸಾಲಿನಲ್ಲಿ 15 ಕೋಟಿ ರೂ. ನಿಗದಿ ಮಾಡಲಾಗಿದ್ದು, ಈ ಹಿಂದೆ ತಾಂತ್ರಿಕ ಮಂಜೂರಾತಿ ಮಾತ್ರ ದೊರೆತಿದ್ದು, ಇನ್ನೂ ಸಮಿತಿಯ approval ಆಗಬೇಕಾಗಿದೆ, Board approval ಆಗಬೇಕಾಗಿದೆ, Cabinet approval ಆಗಬೇಕಾಗಿದೆ. ನಮ್ಮ ತಾಲ್ಲೂಕಿನಲ್ಲಿ ಸಮಸ್ಯೆ ತುಂಬಾ ಬಿಗಡಾಯಿಸಿರುವುದರಿಂದ ಕೂಡಲೇ ಆಡಳಿತಾತ್ಮಕ ಮಂಜೂರಾತಿ ಮಾಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವುದಕ್ಕೆ ಅವಕಾಶ ಮಾಡಿಕೊಡಬೇಕು.

ಅಧ್ಯಕ್ಷರು: ಅವರು administrative sanction ಕೊಡಬೇಕೆಂದು ಕೇಳುತ್ತಿದ್ದಾರೆ, ಅದನ್ನು ಕೊಡಿ.

ಶ್ರೀ ಎಂ.ಬಿ. ಪಾಟೀಲ್: ಅದನ್ನು ಮಾಡಿ ಕೊಡುತ್ತೇವೆ.

ಅಧ್ಯಕ್ಷರು: ಮುಂದಿನ ಗಮನ ಸೆಳೆಯುವ ಸೂಚನೆ ಪ್ರಸ್ತಾಪಿಸಬೇಕಾದ ಮಾನ್ಯ ಶಿವಶಂಕರ್‌ರವರು ಸದನದಲ್ಲಿ ಇಲ್ಲ. ಮುಂದಿನ ಗಮನ ಸೆಳೆಯುವ ಸೂಚನೆಯನ್ನು ಮಾನ್ಯ ಎ.ಎಸ್. ಪಾಟೀಲ್‌ರವರು ಪ್ರಸ್ತಾಪಿಸಬೇಕು.

12. ವಿಷಯ: ಬಿಜಾಪುರ ಜಿಲ್ಲೆಯ ಬೂದಿಹಾಳ ಪೀರಾಪೂರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಶ್ರೀ ಎ.ಎಸ್. ಪಾಟೀಲ್ (ನಡಹಳ್ಳಿ (ದೇವರ ಹಿಪ್ಪರಗಿ): ಮಾನ್ಯ ಅಧ್ಯಕ್ಷರೆ, ಬಿಜಾಪುರ ಜಿಲ್ಲೆಯ ಬೂದಿಹಾಳ ಪೀರಾಪೂರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುತ್ತೇನೆ.